# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.14/ಪಿಆರ್: 21 :2021-22 ದಿನಾಂಕ: 04.09.2021

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)/ಪಿಆರ್/35/2020-21, ದಿ.16.04.2021ರ ಆದೇಶದಂತೆ ದಿ.04.09.2021 ರಂದು ನಡೆದ ಬಾಗಲಗುಂಟೆ ವಾರ್ಡ್ ನಂ.14ರ ಸಭೆಯ ನಡವಳಿಗಳು:-**

ಸಭೆಗೆ ಹಾಜರಾಗಿದ್ದವರ ವಿವರಗಳು:-

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1 | ಶ್ರೀ.ಕೆ.ಮರುಳಸಿದ್ದಪ್ಪ | ಕಾರ್ಯಪಾಲಕ ಅಭಿಯಂತರರು, ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು |
| 2 | ಶ್ರೀ.ವೆಂಕಟೇಶಪ್ಪ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್ ನಂ.14, ಬಾಗಲಗುಂಟೆ |
| 3 | ಶ್ರೀ.ಡಾ\|\|ಹರ್ಷಿತ್ ಹೆಚ್.ಕೆ | ಕೋವಿಡ್ ಮೆಡಿಕಲ್ ಆಫೀಸರ್, ಪ್ರಾಥಮಿಕ ಆರೋಗ್ಯ ಕೇಂದ್ರ, ಬಾಗಲಗುಂಟೆ |
| 4 | ಶ್ರೀ.ಮೋಹನ್ ಗೌರೋಜಿ | ಹಿರಿಯ ಆರೋಗ್ಯ ನಿರೀಕ್ಷಕರು |
| 5 | ಶ್ರೀಮತಿ.ಚೈತ್ರ ಎಂ | ಕಿರಿಯ ಆರೋಗ್ಯ ನಿರೀಕ್ಷಕರು |
| 6 | ಶ್ರೀ.ಮಂಜುನಾಥ್ | ವಾಟರ್ ಇನ್ಸ್‌ಪೆಕ್ಟರ್, ಬಿ.ಡಬ್ಲ್ಯೂ.ಎಸ್.ಎಸ್.ಬಿ ಬಾಗಲಗುಂಟೆ |
| 7 | ಶ್ರೀಮತಿ.ವಿದ್ಯಾಶ್ರೀ ಕೆ.ಎಂ | ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 8 | ಶ್ರೀ.ಪುಟ್ಟರಾಜು | ಕಿರಿಯ ಅಭಿಯಂತರರು, ಬೆಸ್ಕಾಂ |
| 9 | ಶ್ರೀ.ಧನಂಜಯ್ | ಸಹಾಯಕ ಕಂದಾಯ ಅಧಿಕಾರಿಗಳು, ಬಾಗಲಗುಂಟೆ |
| 10 | ಶ್ರೀಮತಿ.ಕವಿತಾ | ಕಲ್ಯಾಣ ಇಲಾಖೆ, ದಾಸರಹಳ್ಳಿ ವಲಯ |
| 11 | ಶ್ರೀ.ರಮೇಶ್ | ಬೀದಿ ದೀಪಗಳ ನಿರ್ವಹಣೆ |
| 12 | ಶ್ರೀ.ಕೃಷ್ಣಮೂರ್ತಿ | ಡಿಫೆನ್ಸ್ ಕಾಲೋನಿ, ನಾಗರೀಕ ಕ್ಷೇಮಾಭಿವೃದ್ದಿ ಸಂಘ |
| 13 | ಶ್ರೀ.ಸದಾಶಿವ | ನಾಗರೀಕ ಹಿತ ರಕ್ಷಣಾ ಸಮಿತಿ, ಎಂ.ಇ.ಐ ಬಡಾವಣೆ |
| 14 | ಶ್ರೀ.ಮೂಡಲಗಿರಿಯಪ್ಪ | ಅಧ್ಯಕ್ಷರು, ಸೌಂದರ್ಯನಗರ ಕ್ಷೇಮಾಭಿವೃದ್ದಿ ಸಂಘ |
| 15 | ಶ್ರೀ.ಮುದ್ದಹನುಮೇಗೌಡ | ನಾಗರೀಕ ಹಿತ ರಕ್ಷಣಾ ಸಮಿತಿ ಸದಸ್ಯರು, ಸಿಡೇದಹಳ್ಳಿ |

ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರು, ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ದಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

ಈ ಹಿಂದಿನ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ, ಬಾಕಿ ಇರುವ ಕುಂದು ಕೊರತೆಗಳನ್ನು ಆದ್ಯತೆಯ ಮೇಲೆ ಪೂರೈಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

- **ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಕತ್ತರಿಸಿದ ರಸ್ತೆಗಳಲ್ಲಿ ಗುಂಡಿಗಳನ್ನು ಮುಚ್ಚುವ ಬಗ್ಗೆ**

ಬಾಗಲಗುಂಟೆ ವಾರ್ಡ್ ವ್ಯಾಪ್ತಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಒಳಚರಂಡಿ ಸಂಪರ್ಕಕ್ಕಾ ಪೈಪ್‌ಲೈನ್ ಅಳವಡಿಸಿದ ನಂತರ ಸರಿಯಾಗಿ Restoration ಮಾಡದಿರುವ ಬಗ್ಗೆ ಸಭೆಯಲ್ಲಿ ಎಲ್ಲಾ ವಾರ್ಡ್ ಸದಸ್ಯರುಗಳು ಒಮ್ಮತದಿಂದ ಸಭೆಯ ಗಮನಕ್ಕೆ ತಂದರು. ಸದರಿ ವಿಷಯದ ಬಗ್ಗೆ ನೋಡೆಲ್ ಅಧಿಕಾರಿಗಳು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರಿಗೆ ಹಾಗೂ ವಾರ್ಡ್ ಅಭಿಯಂತರರಿಗೆ ಕ್ರಮ ಕೈಗೊಳ್ಳಲು ಸಭೆಯಲ್ಲಿ ತಿಳಿಸಿದರು.

ಕ್ರಮ : ಸ.ಕಾ.ನಿ.ಅ/ಸ.ಅ (ಬಿ.ಡಬ್ಲ್ಯೂ.ಎಸ್.ಎಸ್.ಬಿ
ಹಾಗೂ ಸ.ಅ ವಾ-14)

- **ಕೋವಿಡ್-19 ಸಾಂಕ್ರಾಮಿಕ ರೋಗದ ನಿಯಂತ್ರಣದ ಕುರಿತು**

ವಾರ್ಡ್‌ನ ಆರೋಗ್ಯ ಪರಿವೀಕ್ಷಕರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಚರ್ಚಿಸಿ ಬಾಗಲಗುಂಟೆ ವಾರ್ಡ್ ನಂ.14ರ ವ್ಯಾಪ್ತಿಯಲ್ಲಿ

| | |
|---|---|
| ಒಟ್ಟು ಪಾಸಿಟಿವ್ ಕೇಸ್ | 7291, |
| ಬಿಡುಗಡೆ | 7129 |
| Active case | 23 |
| ಮರಣ | 139 |

ಇರುತ್ತದೆಂದು ಸಭೆಯಲ್ಲಿ ತಿಳಿಸಿದರು. ಸಾರ್ವಜನಿಕರು ಹೆಚ್ಚಾಗಿ ಆಗಮಿಸುವ ಪ್ರದೇಶಗಳಲ್ಲಿ ತಾತ್ಕಾಲಿಕ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕ್ರಮವಹಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಲಾಯಿತು. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ 05 ಜನ ಕೋವಿಡ್ ಪರೀಕ್ಷಾ ಸಂಬಂಧ 5ಜನ ವೈದ್ಯರು ಕಾರ್ಯ ನಿರ್ವಹಿಸುತ್ತಿದ್ದು, ಪ್ರತೀ ನಿತ್ಯ ಮನೆಗಳಿಗೆ ಭೇಟಿ ನೀಡಿ ಕೋವೀಡ್ ಪರೀಕ್ಷೆಯನ್ನು ನಡೆಸುತ್ತಿದ್ದಾರೆ ಎಂದು ಹಿರಿಯ ಆರೋಗ್ಯ ಪರಿವೀಕ್ಷಕರವರು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿನ ಲಸಿಕಾ ಕಾರ್ಯಕ್ರಮದ ಬಗ್ಗೆ ಆರೋಗ್ಯ ವೈದ್ಯಾಧಿಕಾರಿಗಳು ಸಭೆಯಲ್ಲಿ ವಿವರಿಸಿದರು.

ಕ್ರಮ : ಆರೋಗ್ಯ ವೈದ್ಯಾಧಿಕಾರಿಗಳು/
ಹಿರಿಯ ಆರೋಗ್ಯ ಪರಿವೀಕ್ಷಕರು

- **ಘನ ತ್ಯಾಜ್ಯ ನಿರ್ವಹಣೆ ಬಗ್ಗೆ / ಖಾಲಿ ನಿವೇಶನಗಳಲ್ಲಿ ಸ್ವಚ್ಛತಾ ಕಾರ್ಯದ ಬಗ್ಗೆ**

ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ ಅಸಮರ್ಪಕವಾಗಿರುವ ಬಗ್ಗೆ ವಾರ್ಡ್ ಸಮಿತಿ ಸಮಿತಿ ಸದಸ್ಯರು ತಮ್ಮ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಈ ಬಗ್ಗೆ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಘನತ್ಯಾಜ್ಯ ನಿರ್ವಹಣೆಯನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಸಂಬಂಧಿಸಿದಂತೆ, ಪಿಪಿಪಿ ಮಾದರಿಯಲ್ಲಿ ಲೋಕಲ್ ಕೋರ್ಡಿನೇಟರ್ ಶುಚಿ ಮಿತ್ರ, ಲೇನ್ ವಾಲೆಂಟರ್ಸ್‌ಗಳನ್ನು ನಿಯೋಜನೆ ಕೊಂಡು ನಿರ್ವಹಿಸುವುದಾಗಿ ಸಭೆಗೆ ತಿಳಿಸಿದರು.

ಈ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಕಸವಿಲೇವಾರಿಗೆ ಸಂಬಂಧಿಸಿದಂತೆ, ದೂರುಗಳು ಪುನರಾವರ್ತನೆ ಆಗುತ್ತಿದ್ದು, ಆದ್ಯತೆಯ ಮೇಲೆ ಅಗತ್ಯ ಕ್ರಮ ವಹಿಸಲು ಸೂಚಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿನ ಖಾಲಿ ನಿವೇಶನಗಳಲ್ಲಿ ಗಿಡಗಂಟಿಗಳು ಬೆಳೆದಿರುವ ಬಗ್ಗೆ ಮತ್ತು ತ್ಯಾಜ್ಯವನ್ನು ವಿಲೇವಾರಿ ಮಾಡಲಾಗುತ್ತಿರುವ ಬಗ್ಗೆ ವಾರ್ಡ್ ಸಮಿತಿ ಸದಸ್ಯರು ಸಭೆಯ ಗಮನಕ್ಕೆ ತಂದರು.ಖಾಲಿ ನಿವೇಶನಗಳ ಮಾಲೀಕರಿಂದ ಸ್ವಚ್ಛಗೊಳಿಸುವ ಸಂಬಂಧಿಸಿದಂತೆ ಚರ್ಚಿಸಲಾಯಿತು. ಸಹಾಯಕ ಕಂದಾಯ ಅಧಿಕಾರಿಗಳು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಹಲವಾರು ಖಾಲಿ ನಿವೇಶನಗಳ ಮಾಲೀಕರ ಮಾಹಿತಿ ಲಭ್ಯವಿರುವುದಿಲ್ಲವೆಂದು ತಿಳಿಸಿದರು. ಈ ಬಗ್ಗೆ ವಿವರವಾಗಿ ಚರ್ಚಿಸಿ ಖಾಲಿ ನಿವೇಶನಗಳ ಸ್ವಚ್ಛತೆಯ ಬಗ್ಗೆ ಮೇಲಾಧಿಕಾರಿಗಳ ಗಮನಕ್ಕೆ ತಂದು ಅಗತ್ಯ ಕ್ರಮ ವಹಿಸಲು ತಿಳಿಸಲಾಯಿತು.

ಕ್ರಮ : ಸ.ಕಾ.ನಿ.ಅ (ಘ.ತ್ಯಾ.ನಿ)/ಹಿರಿಯ/
ಕಿರಿಯ ಆರೋಗ್ಯ ನಿರೀಕ್ಷಕರು

* **ಕಲ್ಯಾಣ ಕಾರ್ಯಕ್ರಮಗಳ ಬಗ್ಗೆ**

ಪಾಲಿಕೆಯ ಕಲ್ಯಾಣ ಕಾರ್ಯಕ್ರಮದ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ಕಳೆದ ಎರಡು ವರ್ಷದಿಂದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗದವರಿಗೆ ಮನೆಗಳನ್ನು ನಿರ್ಮಿಸುವುದಕ್ಕೆ ಸಂಬಂಧಿಸಿದಂತೆ ಅನುಮೋದನೆಯಾಗಿರುವುದಿಲ್ಲವೆಂದು ಹಾಗೂ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್, ಉನ್ನತ ವ್ಯಾಸಂಗಕ್ಕಾಗಿ ಸಹಾಯಧನ ನೀಡುವ ಕಾರ್ಯಕ್ರಮಗಳು ಚಾಲ್ತಿಯಲ್ಲಿರುವುದನ್ನು ಚರ್ಚಿಸಲಾಯಿತು. ನೋಡೆಲ್ ಅಧಿಕಾರಿಗಳು ಮಾತನಾಡಿ ಕಲ್ಯಾಣ ಕಾರ್ಯಕ್ರಮಗಳ ಬಗ್ಗೆ ಮಾಹಿತಿಯೊಂದಿಗೆ ಮುಂದಿನ ಸಭೆಗೆ ಹಾಜರಾಗುವಂತೆ ತಿಳಿಸಿದೆ.

**ಕ್ರಮ:ಕಲ್ಯಾಣ ಅಧಿಕಾರಿಗಳು, ದಾಸರಹಳ್ಳಿ ವಲಯ, ಬಿಬಿಎಂಪಿ**

* **ಇತರೆ ವಿಷಯಗಳ ಬಗ್ಗೆ**

2021-22ನೇ ಸಾಲಿನ ಬಿಬಿಎಂಪಿ ಬಜೆಟ್‌ನಲ್ಲಿ ಈ ಕೆಳಕಂಡಂತೆ ತುರ್ತು ಕಾಮಗಾರಿಗಳನ್ನು ಕೈಗೊಳ್ಳಲು ಅನುದಾನವನ್ನು ಒದಗಿಸಿರುವುದಾಗಿ ವಾರ್ಡ್ ಅಭಿಯಂತರರು ಸಭೆಗೆ ಮಾಹಿತಿ ನೀಡಿದರು.

| Sl | Name of Work | Est Cost in Lakhs |
|---|---|---|
| 1 | Maintenance and repairs of Borewell in Bagalagunte Ward No 14 | 20.00 |
| 2 | Filling of Potholes in Bagalagunte Ward No 14 | 20.00 |
| 3 | Maintenance & Repairs of Footpath and Roads in ward No 14, Bagalagunte | 20.00 |
| 4 | Dismantling & Construction of Culverts, Removal of debries and Providing new Pre-cast RCC covering slabs, desilting of drains in Ward No 14, Bagalagunte | 35.25 |

ಸದರಿ ಕಾಮಗಾರಿಗಳು ತುರ್ತು ಕಾಮಗಾರಿಗಳಾಗಿರುವುದರಿಂದ ತುರ್ತಾಗಿ ನಿರ್ವಹಿಸಲು ಸಭೆಯಲ್ಲಿ ಸರ್ವಾನುಮತದಿಂದ ಅಂಗೀಕರಿಸಲಾಯಿತು.

06/09/2024

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ನಂ. 14, ಬಾಗಲಗುಂಟೆ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ನೋಡಲ್ ಅಧಿಕಾರಿ ಹಾಗೂ**
**ವಾರ್ಡ್ ಸಮಿತಿ ಅಧ್ಯಕ್ಷರು, ವಾ.ನಂ.14, ಬಾಗಲಗುಂಟೆ**
**ಮತ್ತು ಕಾರ್ಯಪಾಲಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಅಧಿಕಾರಿಗಳ ಮಾಹಿತಿಗಾಗಿ:-**

1) ಸನ್ಮಾನ್ಯ ಶ್ರೀ.ಆರ್.ಮಂಜುನಾಥ್ ರವರು, ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನ ಸಭಾ ಕ್ಷೇತ್ರ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿ.ಬಿ.ಎಂ.ಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
3) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
4) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
5) ಆರೋಗ್ಯ ವೈಧ್ಯಾಧಿಕಾರಿಗಳು (ದಾಸರಹಳ್ಳಿ) ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ವಲಯ ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
7) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
9) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಕಳುಹಿಸಿದೆ.
12) ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 14 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
13) ಕಛೇರಿ ಪ್ರತಿ.